ಕರ್ನಾಟಕ ಸರ್ಕಾರ

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ.16–ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು–560052.

ಸಂಖ್ಯೆ:ಹಿಂವಕಇ/ತರಬೇತಿ–4/ಸಿಇಟಿ/ಸಿಆರ್–01/2020–21 ದಿನಾಂಕ: 28.12.2020

## ಪ್ರಕಟಣೆ

2020–21ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಉಚಿತವಾಗಿ ನೀಡುವ NEET ಹಾಗೂ JEE (mains & advanced) ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ Online ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. **ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರಥಮ ಪಿ.ಯು.ಸಿ/10+1 ವ್ಯಾಸಂಗ ಮಾಡುತ್ತಿರುವ (ವಿಜ್ಞಾನ ವಿಭಾಗದಲ್ಲಿ) ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.** **Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:08.01.2021 ಸಂಜೆ 5:00ಗಂಟೆ** ಆಗಿದ್ದು, ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ **www.bcwd.karnataka.gov.in** ಅನ್ನು ನೋಡಲು ತಿಳಿಸಿದೆ.

**ವಿಶೇಷ ಸೂಚನೆ:–**

ಸದರಿ ಪರೀಕ್ಷಾ ಪೂರ್ವ ತರಬೇತಿಗಳಿಗೆ ಸಂಬಂಧಪಟ್ಟಂತೆ NEET ಪರೀಕ್ಷಾ ಪೂರ್ವ ತರಬೇತಿಯನ್ನು ಜಯನಗರ 4ನೇ ಹಂತ, ಬೆಂಗಳೂರು ನಗರ ಜಿಲ್ಲೆ ಇಲ್ಲಿ ಹಾಗೂ JEE (mains & advanced) ಪರೀಕ್ಷಾ ಪೂರ್ವ ತರಬೇತಿಯನ್ನು ವಿಜಯನಗರ, ಬೆಂಗಳೂರು ನಗರ ಜಿಲ್ಲೆ ಇಲ್ಲಿ ನೀಡಲಿದ್ದು, ಅಭ್ಯರ್ಥಿಗಳು ತರಬೇತಿಗೆ ನಿಯಮಿತವಾಗಿ ಹಾಜರಾಗಬೇಕು. ಸರ್ಕಾರ ಕಾಲಕಾಲಕ್ಕೆ ನೀಡುವ ನಿರ್ದೇಶನದಂತೆ ಸದರಿ ಕೋಚಿಂಗ್ ಅನ್ನು ಕ್ಲಾಸ್‌ರೂಂ (ಆಫ್‌ಲೈನ್) ಅಥವಾ ಆನ್‌ಲೈನ್ ಮೂಲಕ ನೀಡಲಾಗುವುದು.

**ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಸಾಮಾನ್ಯ ಅರ್ಹತೆ ಮತ್ತು ಸೂಚನೆಗಳು:**

- ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
- ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಅಥವಾ 3ಬಿ ಯ ಜಾತಿಗೆ ಸೇರಿರಬೇಕು.
- ಅಭ್ಯರ್ಥಿಯ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಮಿತಿ ರೂ.6.00 ಲಕ್ಷಗಳು.
- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸದರಿ ಪರೀಕ್ಷಾ ಪೂರ್ವ ತರಬೇತಿಗಳನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ/10ನೇ ತರಗತಿಯನ್ನು ಪೂರ್ಣಗೊಳಿಸಿರಬೇಕು.
- ಸದರಿ ಪರೀಕ್ಷಾ ಪೂರ್ವ ತರಬೇತಿಯನ್ನು ಖಾಸಗಿ ಸಂಸ್ಥೆಗಳ ಮೂಲಕ ನೀಡಲಾಗುವುದು. ತರಬೇತಿಯು ಉಚಿತವಾಗಿದ್ದು, ತರಬೇತಿ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ತರಬೇತಿ ಭತ್ಯೆ, ಪ್ರಯಾಣ ಭತ್ಯೆ ಹಾಗೂ ಇತರೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.
- Online ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 08.01.2021 ಸಂಜೆ 5:00 ಗಂಟೆ

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.